ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2015–16 ದಿನಾಂಕ: 09–08–2016

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ / ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1. | ಹೊರರಾಜ್ಯ ವಿದ್ಯಾರ್ಥಿಗಳಿಗೆ ಕನ್ನಡ ಮಾಧ್ಯಮ ಪ್ರಶಸ್ತಿ ಪ್ರದಾನ ಸಮಾರಂಭ<br><br>ಉದ್ಘಾಟನೆ:<br><br>ಶ್ರೀಮತಿ ಉಮಾಶ್ರೀ,<br>ಕನ್ನಡ ಮತ್ತು ಸಂಸ್ಕೃತಿ ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಖಾತೆ ಸಚಿವರು.<br><br>ಅಧ್ಯಕ್ಷತೆ:<br><br>ದಿನೇಶ್ ಗುಂಡೂರಾವ್,<br>ಶಾಸಕರು | 10–8–2016<br>ಬುಧವಾರ ಬೆಳಿಗ್ಗೆ<br>11–00 ಗಂಟೆಗೆ | ಸೆಮಿನಾರ್ ಹಾಲ್, ಜ್ಞಾನಜ್ಯೋತಿ ಸಭಾಂಗಣದ ಬಳಿ, ಸೆಂಟ್ರಲ್ ಕಾಲೇಜು ಆವರಣ, ಮೈಸೂರು ಬ್ಯಾಂಕ್ ಹತ್ತಿರ, ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

# ಪಶುಭಾಗ್ಯ ಯೋಜನೆಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)

ಕರ್ನಾಟಕ ಸರ್ಕಾರದ ಮಹಾತ್ವಾಕಾಂಕ್ಷಿ ಕಾರ್ಯಕ್ರಮವಾದ ಪಶುಭಾಗ್ಯ ಯೋಜನೆಯನ್ನು 2016-17ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಬೆಂಗಳೂರು ನಗರ ಜಿಲ್ಲೆಗೆ, ಒಟ್ಟು 287 ಹೈನುಗಾರಿಕೆ ಘಟಕ, ಕುರಿ/ಮೇಕೆ ಘಟಕ-29, ಹಂದಿ ಘಟಕ – 9 ಹಾಗೂ ಕೋಳಿ ಘಟಕ – 20 ಘಟಕಗಳಿಗೆ ಅರ್ಹ ಫಲಾನುಭವಿಗಳನ್ನು ಆಯ್ಕೆಮಾಡಿ ಕಾರ್ಯಕ್ರಮ ಅನುಷ್ಟನಗೊಳಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಈ ಯೋಜನೆ ಬೇಡಿಕೆ ಆಧಾರಿತ ಯೋಜನೆಯಾಗಿದ್ದು 2015-16ನೇ ಸಾಲಿನಲ್ಲಿ ಉಳಿದ ಫಲಾನುಭವಿ ಪಟ್ಟಿ ಒಳಗೊಂಡಂತೆ ಮೊದಲು ಬಂದವರಿಗೆ ಮೊದಲ ಆದ್ಯತೆ ಮೇರೆಗೆ ಇಲಾಖೆಯಲ್ಲಿ ಲಭ್ಯವಿರುವ ಅನುದಾನದಲ್ಲಿ ಅನುಷ್ಠಾನಗೊಳಿಸಲಾಗುವುದು. ಭೂರಹಿತ ಫಲಾನುಭವಿಗಳಿಗೆ, ವಲಸೆ ಬಂದು ನೆಲೆಸಿದರಿಗೆ ಮೊದಲ ಆದ್ಯತೆ ನೀಡಲಾಗುವುದು. ಅಮೃತ ಯೋಜನೆ ಅಡಿಯಲ್ಲಿ (ಹಸು ಘಟಕ) ವಿಧವೆಯರಿಗೆ/ದೇವದಾಸಿಯರಿಗೆ/ದೌರ್ಜನ್ಯಕ್ಕೆ ಒಳಗಾದ ಮಹಿಳೆಯರಿಗೆ/ಸಂಕಷ್ಟಕ್ಕೊಳಗಾದ ಮಹಿಳೆಯರಿಗೆ ಮಾತ್ರ ಅವಕಾಶವಿರುತ್ತದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ಫಲಾನುಭವಿಗಳಿಗೆ ಆಯಾ ಘಟಕ ವೆಚ್ಚ ಶೇ 50 ಸಹಾಯಧನವನ್ನು ಹಾಗು ಇತರೆ ಆಫಲಾನುಭವಿಗಳಿಗೆ ಶೇ. 25 ಸಹಾಯಧನವನ್ನು ಸಾಲ ಮಂಜೂರು ಮಾಡುವ ಬ್ಯಾಂಕ್‍ಗಳ ಮುಖಾಂತರ ಪಾವತಿಸಲಾಗುವುದು. ಯೋಜನೆಯ ಒಟ್ಟು ಫಲಾನುಭವಿಗಳ ಸಂಖ್ಯೆಯಲ್ಲಿ ಶೇ 33 ರಷ್ಟು ಮಹಿಳೆಯರಿಗೆ, ಶೇ 3 ರಷ್ಟು ಅಂಗವಿಕಲರಿಗೆ ಹಾಗೂ ಅಲ್ಪಸಂಖ್ಯಾತರಿಗೆ ಶೇ 5 ರಷ್ಟು ಮೀಲಿಸರಿಸಲಾಗಿದೆ. ಪಶುಭಾಗ್ಯ ಯೋಜನೆಯ ಎಲ್ಲಾ ಫಲಾನುಭವಿಗಳಿಗೆ ತರಬೇತಿ ಪಡೆಯುವುದನ್ನು ಕಡ್ಡಾಯಗೊಳಿಸಿದೆ ಹಾಗೂ ಮಹಾತ್ಮಾಗಾಂಧಿ ರಾಷ್ಟ್ರೀಯ ಉದ್ಯೋಗ ಖಾತ್ರಿ ಯೋಜನೆಯಡಿಯಲ್ಲಿ ದನ/ಕುರಿ/ಹಂದಿ ದೊಡ್ಡಿ ನಿರ್ಮಿಸಲು ಅವಕಾಶವಿದೆ.

ಹೆಚ್ಚಿನ ವಿವರಗಳಿಗೆ ಮತ್ತು ಅರ್ಜಿ ನಮೂನೆಗಾಗಿ ಆಯಾ ಭಾಗದ ಪಶುಸಂಗೋಪನಾ ಇಲಾಖೆಯ ಸಹಾಯಕ ನಿರ್ದೇಶಕರು / ಪಶುವೈದ್ಯಾಧಿಕಾರಿಗಳು / ಪಶುವೈದ್ಯಕೀಯ

ಪರೀಕ್ಷಕರು/ಪಶುಆಸ್ಪತ್ರೆ/ಪಶುಚಿಕಿತ್ಸಾಲಯ/ಪ್ರಾಥಮಿಕ ಪಶುಚಿಕಿತ್ಸಾಲಯಗಳಿಂದ ಪಡೆದು ಸೆಪ್ಟೆಂಬರ್ 20 ರೊಳಗೆ ಭರ್ತಿಮಾಡಿದ ಅರ್ಜಿಗಳನ್ನು ಸಲ್ಲಿಸಬೇಕಾಗಿದೆ.

ಬಾಬು:ಜಿಪಿಆರ್.

## ಹೈನುಗಾರಿಕೆ ತರಬೇತಿ

ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)

ರಾಜ್ಯ ಜಾನುವಾರು ಸಂವರ್ಧನಾ ಮತ್ತು ತರಬೇತಿಕೇಂದ್ರ (ಇಂಡೋ–ಡ್ಯಾನಿಷ್ ಫಾರಂ), ಹೆಸರಘಟ್ಟ, ಬೆಂಗಳೂರು – 88 ಇಲ್ಲಿ ಆಗಸ್ಟ್ 22 ರಿಂದ 27 ರ ವರೆಗೆ ಬೆಳಿಗ್ಗೆ 10–00 ಗಂಟೆಯಿಂದ ಸಾಯಂಕಾಲ 4–30 ಗಂಟೆವರೆಗೆ ಹೈನುಗಾರಿಕೆ ಪ್ರಾರಂಭಿಸಲು ಆಸಕ್ತಿಯುಳ್ಳ ರೈತರಿಗೆ, ರೈತ ಮಕ್ಕಳಿಗೆ ಹಾಗೂ ರೈತ ಮಹಿಳೆಯರಿಗೆ ಆರು ದಿನಗಳ "ಹೈನುಗಾರಿಕೆ ಹಾಗೂ ಮೇವು ಉತ್ಪಾದನೆ" ಬಗ್ಗೆ ತರಬೇತಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಈ ತರಬೇತಿ ಅವಧಿಯಲ್ಲಿ ಊಟ ಮತ್ತು ಪ್ರಯಾಣದ ವೆಚ್ಚವನ್ನು ಅಭ್ಯರ್ಥಿಗಳೇ ಭರಿಸತಕ್ಕದ್ದು. ತರಬೇತಿ ಅವಧಿಯಲ್ಲಿ ವಿದ್ಯಾರ್ಥಿ ನಿಲಯದಲ್ಲಿ ಉಳಿದುಕೊಳ್ಳಲು ಇಚ್ಛಿಸಿದರೆ ಒಂದು ದಿನಕ್ಕೆ ರೂ 25/– ರಂತೆ ವಸತಿ ಶುಲ್ಕ ಪಾವತಿಸಬೇಕಾಗಿರುತ್ತದೆ.

ತರಬೇತಿ ಪಡೆಯಲು ಇಚ್ಛಿಸುವವರು ವಾಸಸ್ಥಳದ ಯಾವುದಾದರೊಂದು ದೃಢೀಕರಣದ ಪ್ರತಿ ಹಾಗೂ ಇತ್ತೀಚಿನ 2 ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳೊಂದಿಗೆ ಆಗಸ್ಟ್ 22 ರಂದು ಬೆಳಿಗ್ಗೆ 9–30 ಗಂಟೆಗೆ ನೇರವಾಗಿ ತರಬೇತಿಗೆ ಹಾಜರಾಗಬಹುದು.

ಹೆಚ್ಚಿನ ಮಾಹಿತಿಗಾಗಿ ಕಚೇರಿ ವೇಳೆಯಲ್ಲಿ ಉಪ ನಿರ್ದೇಶಕರು (ತರಬೇತಿ) ಇವರನ್ನು ನೇರವಾಗಿ ಅಥವಾ ದೂರವಾಣಿ ಮುಖೇನ ಸಂಪರ್ಕಿಸಿ ಮಾಹಿತಿ ಪಡೆಯಬಹುದಾಗಿದೆ. ಕಚೇರಿ ದೂರವಾಣಿ ಸಂಖ್ಯೆ 080 – 28466397.

ಬಾಬು:ಜಿಪಿಆರ್.

## ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ಪುಸ್ತಕ ಬಹುಮಾನ – 2015 ರಡಿಯ ಲಲಿತಕಲೆಗೆ ಸಂಬಂಧಪಟ್ಟ ಸಾಂಪ್ರದಾಯಿಕ, ಸಮಕಾಲೀನ ಇತ್ಯಾದಿ ಯಾವುದೇ ಪ್ರಕಾರದ ಲಲಿತಕಲೆ ಸಂಬಂಧಪಟ್ಟದ್ದಾರಬೇಕು. ವಿವಿಧ ಸರ್ಕಾರಿ ಸಂಸ್ಥೆಗಳು, ವಿಶ್ವವಿದ್ಯಾಲಯಗಳೂ, ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಪುಸ್ತಕ ಪ್ರಾಧಿಕಾರ, ಇತರೆ ಅಕಾಡೆಮಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇನ್ನೂ ಮುಂತಾದ ಅನುದಾನ ಸಂಸ್ಥೆಗಳಿಂದ ಅನುದಾನ ಪಡೆದು ತಾವೇ ಪ್ರಕಟಿಸಿದ ಅಥವಾ ಅಂತಹ ಸಂಸ್ಥೆಗಳೇ ಬರೆಸಿ ಪ್ರಕಟಿಸಿದ ಕೃತಿಗಳನ್ನು ಪರಿಗಣಿಸುವುದಿಲ್ಲ. ಪುಸ್ತಕ ಬಹುಮಾನದ ಮೊತ್ತ ರೂ 25,000–00 ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕವು ಪುನರ್ ಮುದ್ರಣವಾಗಿರಬಾರದು. ಮೊದಲ ಅವೃತ್ತಿಯಲ್ಲಿ ಪ್ರಕಟಗೊಂಡಿರಬೇಕು. ಕೃತಿ ಪುಸ್ತಕ ದಿನಾಂಕ: 1-01-2014 ರಿಂದ 31-12-2014 ರ ಅವಧಿಯಲ್ಲಿ ಮುದ್ರಣಗೊಂಡಿರಬೇಕು. ಪುಸ್ತಕ ಬಹುಮಾನಕ್ಕೆ ಅರ್ಜಿ ಸಲ್ಲಿಸುವ ಲೇಖಕರು ತಾವು ಕಳುಹಿಸುವ ಪುಸ್ತಕದ 4 ಪ್ರತಿಗಳನ್ನು ಉಚಿತವಾಗಿ ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಕಡ್ಡಾಯವಾಗಿ ನೀಡಬೇಕು. ಸೆಪ್ಟೆಂಬರ್ 9 ರೊಳಗಾಗಿ (ರಜಾ ದಿನಗಳನ್ನು ಹೊರತುಪಡಿಸಿ) ಖುದ್ದಾಗಿ ಅಥವಾ ಅಂಚೆ ಮೂಲಕ ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, 2ನೇಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 (ದೂ. 080–22480297) ಇವರನ್ನು ಸಂಪರ್ಕಿಸಬಹುದಾಗಿದೆ.

**ಬಾಬು:ಜಿಪಿಆರ್.**

## ಕಲಾಧ್ಯಯನ ಫೆಲೋಶಿಪ್

**ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)**

ಕರ್ನಾಟಕ ಲಲಿತಕಲಾ ಅಕಾಡೆಮಿಯು ಲಲಿತಕಲೆಯಲ್ಲಿ 2016–17 ನೇ ಸಾಲಿನ ಕಲಾಧ್ಯಯನ ಫೆಲೋಶಿಫ್, ವಿಶೇಷ ಸಾಧನೆ ಮಾಡಿದ ಪರಿಣಿತರಿಗೆ ಸಂಶೋಧನೆ/ಕಲಾ ಅಧ್ಯಯನ ಫೆಲೋಶಿಫ್, ವಿಶೇಷ ಸಾಧನೆ ಮಾಡಿದ ಪರಿಣಿತರಿಗೆ ಸಂಶೋಧನೆ/ಕಲಾ ಅಧ್ಯಯನ ಮಾಡುವ ಸಲುವಾಗಿ ಪರಿಶಿಷ್ಟ ಜಾತಿ : ಪರಿಶಿಷ್ಟ ಪಂಗಡ, ಸಾಮಾನ್ಯ ವರ್ಗದ ಆಸಕ್ತ ಕಲಾವಿದರಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಕಲಾಧ್ಯಯನದ ಅವಧಿ ಒಂದು ವರ್ಷ, ಆಸಕ್ತರು ಕಲಾಸಂಶೊಧನೆಗಾಗಿ / ಯಾವುದೇ ಲಲಿತಕಲೆಯ (ಚಿತ್ರಕಲೆ) ವಿಷಯವನ್ನು ಆರಿಸಿಕೊಳ್ಳಬಹುದು. ಈ ಬಗ್ಗೆ ಸುಮಾರು 4–5 ಪುಟಗಳ ಲೇಖನವನ್ನು ಅರ್ಜಿಯೊಂದಿಗೆ ಸಲ್ಲಿಸುವುದು. ಅರ್ಜಿಗಳನ್ನು ಸಲ್ಲಿಸಲು ಸೆಪ್ಟೆಂಬರ್ 9 ಕೊನೆಯ ದಿನವಾಗಿರುತ್ತದೆ.

ಪ್ರತಿ ವರ್ಗದ 10 ಕಲಾವಿದರಿಗೆ ನೀಡಲಾಗುವ ಫೆಲೋಶಿಫ್ (ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಸಾಮಾನ್ಯ) ವರ್ಗಗಳಿಗೆ ಒಟ್ಟು 30 ಅಭ್ಯರ್ಥಿಗಳನ್ನು ಸಂದರ್ಶನದ ಮೂಲಕ ಆಯ್ಕೆ ಮಾಡಲಾಗುವುದು.

ಆಯ್ಕೆಯಾದವರಿಗೆ ರೂ 1.00 ಲಕ್ಷ ಕಲಾ ಸಂಶೋಧನಾ ಫೆಲೋಶಿಪ್ ಮೊತ್ತವನ್ನು ಮೂರು ಕಂತುಗಳಲ್ಲಿ ನೀಡಲಾಗುವುದು.

ಹೆಚ್ಚಿನ ವಿವರಗಳಿಗೆ ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, 2ನೇಮಹಡಿ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 560 002 (ದೂ. 080–22480297) ಸಂಪರ್ಕಿಸುವುದು. ಸ್ವ–ವಿಳಾಸದ ಲಕೋಟೆ ಕಳುಹಿಸಿ, ಅಂಚೆಯ ಮೂಲಕವೂ ಅರ್ಜಿಗಳನ್ನು ತರಿಸಿಕೊಳ್ಳಬಹುದಾಗಿದೆ ಅಥವಾ ಅಕಾಡೆಮಿಯ ವೆಬ್‌ಸೈಟ್ www.lalithkalakarnataka.org ನಲ್ಲಿ ಅರ್ಜಿಯನ್ನು ಪಡೆಯಬಹುದಾಗಿದೆ.

ಬಾಬು:ಜಿಪಿಆರ್.

## ಸಂಗೀತ ವಿಭಾಗದ ಪ್ರಶಸ್ತಿಗಾಗಿ ಆಯ್ಕೆ

**ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)**

ರಾಜ್ಯ ಸರ್ಕಾರವು 2015 ನೇ ಸಾಲಿನ ಸಂಗೀತ ವಿಭಾಗದ ಪ್ರಶಸ್ತಿಗಳನ್ನು ಪ್ರಕಟಿಸಿದೆ ಶ್ರೀ ನಿಜಗುಣ ಪುರಂಧರ ಪ್ರಶಸ್ತಿಗೆ ಬೆಂಗಳೂರಿನ ಬೆಳಕವಾಡಿ ರಂಗಸ್ವಾಮಿ ಅಯ್ಯಂಗಾರ್ ಅವರಿಗೆ, ಸಂತಶಿಶುನಾಳ್ ಷರೀಫ್ ಪ್ರಶಸ್ತಿಯನ್ನು ಶ್ರೀಮತಿ ರತ್ನಮಾಲ್ ಪ್ರಕಾಶ್ ಅವರಿಗೆ ಹಾಗೂ ಕುಮಾರವ್ಯಾಸ್ ಪ್ರಶಸ್ತಿಯನ್ನು ಶ್ರೀಮತಿ ಕಮಲಮ್ಮ ವಿಠಲ್‌ರಾವ್ ಅವರನ್ನು ಆಯ್ಕೆ ಮಾಡಿದೆ.

ಈ ಪ್ರಶಸ್ತಿಗಳಿಗೆ ಅರ್ಹರನ್ನು ಆಯ್ಕೆ ಮಾಡಲು ಹಿರಿಯ ಸಂಗೀತ ವಿದ್ವಾಂಸ ಆರ್. ಕೆ. ಪದ್ಮನಾಭ್ ಅವರ ಅಧ್ಯಕ್ಷತೆಯಲ್ಲಿ ಆಯ್ಕೆ ಸಮಿತಿಯನ್ನು ರಚಿಸಲಾಗಿತ್ತು.

**ಬಾಬು:ಜಿಪಿಆರ್.**

## ವಿವಿಧ ಸ್ಪರ್ಧೆಗಳು

**ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)**

ಬೆಂಗಳೂರಿನ ಬಾಲ ಭವನವು ಸ್ವಾತಂತ್ರ್ಯ ದಿನಾಚರಣೆಯ ಅಂಗವಾಗಿ ಆಗಸ್ಟ್ 15 ರಂದು ಮಕ್ಕಳಿಗೆ ದೇಶಭಕ್ತಿ ಗೀತೆ, ಸ್ಥಳದಲ್ಲೇ ಪ್ರಬಂಧ ಬರೆಯುವ ಸ್ಪರ್ಧೆ ಹಾಗೂ ಪಿಕ್ ಮತ್ತು ಆ್ಯಕ್ಟ್ ಸ್ಪರ್ಧೆಗಳನ್ನು ಹಮ್ಮಿಕೊಂಡಿದೆ.

ಸ್ಪರ್ಧೆಗಳಲ್ಲಿ ಭಾಗವಹಿಸುವ ಆಸಕ್ತ ಮಕ್ಕಳು ಆಗಸ್ಟ್ 13 ರೊಳಗೆ ವಿವರಗಳನ್ನು ಕಚೇರಿ ವೇಳೆಯಲ್ಲಿ ನೋಂದಾಯಿಸಲು ಕೋರಿದೆ (ರಜಾ ದಿನಗಳನ್ನು ಹೊರತುಪಡಿಸಿ)

ಹೆಚ್ಚಿನ ವಿವರಗಳಿಗೆ ಹಾಗೂ ನೋಂದಣಿಗಾಗಿ ಕಾರ್ಯದರ್ಶಿಗಳ ಕಚೇರಿ, ಬಾಲ ಭವನ, ಸೊಸೈಟಿ, ಕಬ್ಬನ್ ಪಾರ್ಕ್, ಬೆಂಗಳೂರು ಇಲ್ಲಿ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ: 080–22861423/22864189 ರ ಮೂಲಕ ಸಂಪರ್ಕಿಸಲು ಕೋರಿದೆ. ಇ ಮೇಲ್ secybalbhavan.bng@gmail.com.

**ಬಾಬು:ಜಿಪಿಆರ್.**

## ಬೇಕರಿ ತರಬೇತಿ

**ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)**

ಬೇಕರಿ ತರಬೇತಿ ಘಟಕದ ವತಿಯಿಂದ ಬೇಕರಿ ತಂತ್ರಜ್ಞಾನದಲ್ಲಿ ಒಂದು ವರ್ಷದ ಡಿಪ್ಲೋಮ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಈ ತರಬೇತಿಯಲ್ಲಿ ಬ್ರೆಡ್, ಬನ್, ಪಪ್ಸ್, ಕೇಕ್‌ಗಳು, ವಿಶೇಷ ಬಿಸ್ಕತ್ತುಗಳು, ರೋಲ್ಸ್‌ಗಳು ಮತ್ತಿತರ ಆಕರ್ಷಕ ಪದಾರ್ಥಗಳನ್ನು ಕಲಿಸಲಾಗುವುದು. ಅಭ್ಯರ್ಥಿಗಳು ಸ್ವತ: ಪದಾರ್ಥ ತಯಾರಿಸುವ ಮೂಲಕ ಕಲಿಯುವ ಸೌಲಭ್ಯವಿದೆ.

ಬೇಕರಿ ತಂತ್ರಜ್ಞಾಬನದಲ್ಲಿ ಒಂದು ವರ್ಷದ ಡಿಪ್ಲೋಮಗೆ ವಿದ್ಯಾರ್ಹತೆ, ಕನಿಷ್ಟ ಎಸ್.ಎಸ್.ಎಲ್.ಸಿ./ಹತ್ತನೇ ತರಗತಿ ಉತ್ತೀರ್ಣರಾಗಿರಬೇಕು. ಡಿಪ್ಲೋಮ ಪಡೆದವರಿಗೆ ಆಹಾರ ಮತ್ತು ಬೇಕರಿ ಉದ್ಧಿಮೆಯಲ್ಲಿ ಉತ್ತಮ ಉದ್ಯೋಗಕಾಶಗಳಿರುತ್ತವೆ. ಜೊತೆಎ ವಿವಿಧ ಆಹಾರ ಉದ್ಧಿಮೆಗಳಲ್ಲಿ ಕೆಲಸ ನಿರ್ವಹಿಸಲು ಅವಕಾಶ ಮಾಡಿಕೊಡಲಾಗುವುದು ಆಗಸ್ಟ್ 31 ರ ವರೆಗೆ ಅರ್ಜಿಯನ್ನು ವಿತರಿಸಲಾಗುವುದು.

ಹೆಚ್ಚಿನ ವಿವರಗಳಿಗೆ ಸಂಯೋಜಕರು, ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024, ಇವರನ್ನು ಖುದ್ದಾಗಿ ಅಥವಾ ದೂರವಾಣೀ ಸಂಖ್ಯೆ 23513370 ಮೂಲಕ ಕಚೇರಿಯ ಕೆಲಸದ ವೇಳೆಯಲ್ಲಿ ಸಂಪರ್ಕಿಸಬಹುದಾಗಿದೆ. ಸೆಪ್ಟಂಬರ್ 9 ರಂದು ಬೆಳಿಗ್ಗೆ 10 ಗಂಟೆಯಿಂದ ಕೌನ್ಸಿಲಿಂಗ್ ಮತ್ತು ಪ್ರವೇಶವು ಬೇಕರಿ ತರಬೇತಿ ಕೇಂದ್ರ, ವಿಸ್ತರಣಾ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಹೆಬ್ಬಾಳ, ಬೆಂಗಳೂರು – 560 024 ಇಲ್ಲಿ ನಡೆಯಲಿದೆ.

**ಬಾಬು:ಜಿಪಿಆರ್.**

# ಸಫಾಯಿ ಕರ್ಮಚಾರಿಗಳಿಗೆ ವೇತನ ಹೆಚ್ಚಳ ಸೌಭಾಗ್ಯ

**ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)**

ರಾಜ್ಯದ ವಿವಿಧ ಸ್ಥಳೀಯ ಸಂಸ್ಥೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಫಾಯಿ ಕರ್ಮಚಾರಿಗಳ ಕನಿಷ್ಠ ವೇತನ 04-08-2016 ರಿಂದ ಅನ್ವಯವಾಗುವಂತೆ ಹೆಚ್ಚಿಸಿ ಕಾರ್ಮಿಕ ಇಲಾಖೆ ಆದೇಶ ಹೊರಡಿಸಿದೆ.

ಇದರ ಅನ್ವಯ ಸಫಾಯಿ ಕರ್ಮಚಾರಿಗಳು ಮಹಾನಗರ ಪಾಲಿಕೆಗಳಲ್ಲಿ ಪಡೆಯುತ್ತಿದ್ದ ಮಾಸಿಕ ರೂ 7730/- ದ್ವಿಗುಣಗೊಂಡಿದ್ದು ಹೊಸ ಹೆಚ್ಚಳದ ಅನ್ವಯ ರೂ 14040/- ಮತ್ತು ರೂ 3000/- ಸಂಕಷ್ಟ ಭತ್ಯೆ ಸೇರಿ ರೂ 17040/- ಮಾಸಿಕ ವೇತನವನ್ನು ಪಡೆಯಲಿದ್ದಾರೆ. ನಗರ ಸಭೆ ವ್ಯಾಪ್ತಿಯ ಹಳೆ ವೇತನ ರೂ 6953/- ಇದ್ದದ್ದು ಈಗ ರೂ 16650/-, ಪುರಸಭೆ ಮತ್ತು ಪಟ್ಟಣ ಪಂಚಾಯತಿಗಳಲ್ಲಿ ಹಳೆ ವೇತನ ರೂ 6166/- ಈಗ ರೂ 15740/- ಪಡೆಯಲಿದ್ದಾರೆ.

ಸರ್ಕಾರ ನೀಡಿರುವ ಈ ವೇತನ ಹೆಚ್ಚಳ ಕುರಿತು ಇಂದು ಪತ್ರಿಕಾ ಗೋಷ್ಠಿಯಲ್ಲಿ ವಿವರಿಸಿದ ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷ ನಾರಾಯಣ ಅವರು ದೇಶದಲ್ಲಿ ಸಫಾಯಿ ಕರ್ಮಚಾರಿಗಳಿಗೆ ಈ ಮಟ್ಟದ ವೇತನ ಹೆಚ್ಚಳವನ್ನು ಯಾವ ರಾಜ್ಯ ಸರ್ಕಾರವೂ ಕೂಡ ನೀಡಿಲ್ಲ, ಗುಜರಾತ್ ರಾಜ್ಯದಲ್ಲಿ ರೂ 9400, ಕೇರಳದಲ್ಲಿ ರೂ 12000 ಮತ್ತು ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ ಕೂಡ ರೂ 10000 ನೀಡುತ್ತಿದ್ದು ದೇಶದಲ್ಲಿ ಅತಿ ಹೆಚ್ಚು ವೇತನವನ್ನು ನೀಡುತ್ತಿರುವುದು ಕರ್ನಾಟಕ ರಾಜ್ಯ ಮಾತ್ರ ಎಂದು ಹೇಳಿದರು.

ಸಫಾಯಿ ಕರ್ಮಚಾರಿಗಳ ಕಲ್ಯಾಣಕ್ಕಾಗಿ ರಾಜ್ಯ ಸರ್ಕಾರವು ಹಲವು ಕಲ್ಯಾಣ ಯೋಜನೆಗಳನ್ನು ರೂಪಿಸಿದೆ, ಅದರಲ್ಲಿ ಮುಖ್ಯವಾಗಿ ಯಾಂತ್ರೀಕೃತವಲ್ಲದ ಕರ್ಮಚಾರಿಗಳ ಮುಕ್ತ ರಾಜ್ಯವನ್ನಾಗಿಸಲು ಪಣ ತೊಟ್ಟಿದೆ, ಈಗಾಗಲೇ ಬೆಂಗಳೂರಿನ ಆಯ್ದ 60 ಕಾರ್ಮಿಕರನ್ನು ಆಯ್ಕೆ ಮಾಡಿಕೊಂಡು ಧರ್ಮಸ್ಥಳದ ಗ್ರಾಮೀಣಾಭಿವೃದ್ಧಿ ಸಂಸ್ಥೆಯಲ್ಲಿ 1 ತಿಂಗಳ ಕಾಲ ಸ್ವಯಂ ಉದ್ಯೋಗದ ತರಬೇತಿಯನ್ನು ನೀಡಲಾಗಿದೆ, ಅವರ ಮುಂದಿನ ಜೀವನೋಪಾಯಕ್ಕಾಗಿ ಕೇಂದ್ರ ಸರ್ಕಾರದ ಅನುದಾನವನ್ನು ಡಾ. ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ 1 ಲಕ್ಷ ರೂಗಳನ್ನು ಸಹಾಯ ಧನವಾಗಿ ನೀಡಲಾಗುವುದು ಮತ್ತು ಅವರ ವಸತಿ ಹಾಗೂ ಮಕ್ಕಳ ಶಿಕ್ಷಣಕ್ಕಾಗಿ ರಾಜ್ಯ ಸರ್ಕಾರದಿಂದ ಸಹ ಸಹಾಯ ಸಿಗಲಿದೆ ಎಂದರು.

2007ರಲ್ಲಿ ರಾಜ್ಯ ಸರ್ಕಾರ ನಡೆಸಿದ್ದ ಯಾಂತ್ರೀಕೃತವಲ್ಲದ ಕರ್ಮಚಾರಿಗಳ ಸಮೀಕ್ಷೆಯಲ್ಲಿ ಒಟ್ಟು 302 ಕಾರ್ಮಿಕರಿದ್ದಾರೆ ಎಂದು ಸಮಿತಿ ವರದಿ ನೀಡಿತ್ತು, ಆದರೆ ಇದಕ್ಕೆ ತದ್ವಿರುದ್ಧವಾಗಿ 2013 ಯಾಂತ್ರೀಕೃತವಲ್ಲದ ಕರ್ಮಚಾರಿಗಳ ಕಾಯ್ದೆ ಅನ್ವಯ ಕೇಂದ್ರ ಸರ್ಕಾರ 2014 ರಲ್ಲಿ ನಡೆಸಿದ ಸಮೀಕ್ಷೆಯಲ್ಲಿ ರಾಜ್ಯದಲ್ಲಿ ಒಟ್ಟು 15375 ಯಾಂತ್ರೀಕೃತವಲ್ಲದ ಕರ್ಮಚಾರಿಗಳು ಇದ್ದಾರೆಂದು ವರದಿ ನೀಡಿತ್ತು. ಈ ತರಹದ ಭಿನ್ನ ವರದಿಗಳನ್ನು ಗಮನಿಸಿರುವ ರಾಜ್ಯ ಸರ್ಕಾರ

**ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಇಲಾಖೆಯ ಮುಖಾಂತರ ಮರು ಸರ್ವೆ ನಡೆಸುತ್ತಿದೆ, ನವೆಂಬರ್ 2016 ರೊಳಗೆ ಅಂತಿಮ ಪಟ್ಟಿ ಆಯೋಗದ ಕೈ ಸೇರಲಿದೆ ಎಂದು ಹೇಳಿದರು.**

**ಪತ್ರಿಕಾ ಗೋಷ್ಠಿಯಲ್ಲಿ ಡಾ. ಬಿ ಆರ್ ಅಂಬೇಡ್ಕರ್ ಅಭಿವೃದ್ಧಿ ನಿಗಮದ ಬೆಂಗಳೂರು ಕಚೇರಿಯ ನಿರ್ದೇಶಕ ಪದ್ಮನಾಭ್ ಮತ್ತು ಯಾಂತ್ರೀಕೃತವಲ್ಲದ ಕರ್ಮಚಾರಿಗಳು ಹೊರ ಬಂದು ಸ್ವಯಂ ಉದ್ಯೋಗ ತರಬೇತಿ ಪಡೆದಿರುವ ಹಲವು ಕಾರ್ಮಿಕರು ತಮ್ಮ ಅನುಭವಗಳನ್ನು ಹಂಚಿಕೊಂಡರು.**

**ಬಾಬು:ಜಡಿಯಪ್ಪ:ಜಿಪಿಆರ್**

# ಸರ್ಕಾರಿ ಆಸ್ಪತ್ರೆಗಳಲ್ಲಿ ನಗುಮುಖದ ಸ್ವಾಗತ ಅತಿ ಮುಖ್ಯ – ಕೆ.ಆರ್.ರಮೇಶ್‌ಕುಮಾರ್

**ಬೆಂಗಳೂರು, ಆಗಸ್ಟ್ 9 (ಕರ್ನಾಟಕ ವಾರ್ತೆ)**

ನಮ್ಮ ಸರ್ಕಾರಿ ಆಸ್ಪತ್ರೆಗಳಲ್ಲಿ ರೋಗಿಗಳು ಬಂದಾಗ ಸ್ವಾಗತಗಾರರು ಅವರ ಮನಸ್ಸಿಗೆ ನೋವು ಉಂಟಾಗದ ರೀತಿ ನಡೆದುಕೊಳ್ಳಬೇಕು. ಆಗ ರೋಗಿಗಳಿಗೂ ಸಹಿತ ಸರ್ಕಾರಿ ಆಸ್ಪತ್ರೆಗಳಿಗೆ ಬರುವ ಮನಸ್ಸು ಬರುತ್ತದೆ ಎಂದು ಆರೋಗ್ಯ ಸಚಿವ ಕೆ.ಆರ್. ರಮೇಶ್ ಅವರು ತಿಳಿಸಿದರು.

ಇಂದು ಕೆ.ಸಿ. ಜನರಲ್ ಆಸ್ಪತ್ರೆಯಲ್ಲಿ ಪ್ರಧಾನ ಮಂತ್ರಿ ಸುರಕ್ಷಿತ ಮಾತೃತ್ವ ಅಭಿಯಾನ ಹಾಗೂ ತಾಯಂದಿರ ಸಂಪೂರ್ಣ ವಾತ್ಸಲ್ಯ ಕಾರ್ಯಕ್ರಮವನ್ನು ಉದ್ಘಾಟಿಸಿದ ನಂತರ ಸರ್ಕಾರ ಎಷ್ಟೇ ಯೋಜನೆಗಳನ್ನು ಮಾಡಿದರೂ ಕೂಡಾ ಅದು ಪ್ರಯೋಜನವಾಗುವುದಿಲ್ಲ. ಅವು ಯಾವಾಗ ಪ್ರಯೋಜನವಾಗುತ್ತದೆ ಎಂದರೆ ಸರಿಯಾದ ರೀತಿ ಕಾರ್ಯಗತವಾದಲ್ಲಿ ಮಾತ್ರ ಅ ಯೋಜನೆಗಳು ಸಾರ್ಥಕವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಸರ್ಕಾರದ ಯೋಜನೆಗಳನ್ನು ವ್ಯಾಪಕವಾದ ರೀತಿ ಪ್ರಚಾರ ಮಾಡುವುದು ಮತ್ತು ಆಶಾ ಕಾರ್ಯಕರ್ತೆಯರಿಗೆ ಪ್ರೇರಣೆ ಹಾಗೂ ಅವರನ್ನು ಗುರುತಿಸುವ ಕೆಲಸವಾಗಬೇಕು. ಹಳ್ಳಿಗಾಡಿನಲ್ಲಿ ಆಶಾ ಕಾರ್ಯಕರ್ತೆಯರು ಗರ್ಭಿಣಿಯರನ್ನು ಗುರುತಿಸಿ ಕಡ್ಡಾಯವಾಗಿ ಸರ್ಕಾರಿ ಆಸ್ಪತ್ರೆಯಲ್ಲೇ ಹೆರಿಗೆ ಮಾಡಿಸಿಕೊಳ್ಳುವ ರೀತಿ ಅವರೊಂದಿಗೆ ಸಮಾಲೋಚನೆ ಮಾಡಬೇಕು ಎಂದರು.

ನಾನು ಕೂಡಾ ಬೇರೆ ತಾಯಿಯ ಹಾಲನ್ನು ಕುಡಿದು ಬೆಳೆದಿರುತ್ತೇನೆ. ಆ ಕಾಲದಲ್ಲಿ ಮಗು ಆರೋಗ್ಯವಾಗಿರಬೇಕೆಂದು ತಾಯಂದಿರು ಎದೆ ಹಾಲನ್ನು ಚಾಚು ತಪ್ಪದೇ ಕುಡಿಸುತ್ತಿದ್ದರು.

ನಮ್ಮ ವೈದ್ಯರು ಹಳ್ಳಿಗಳಿಗೆ ಹೋಗಬೇಕು. ಅಲ್ಲಿ ಸಾರ್ವಜನಿಕರೊಂದಿಗೆ ಬೆರೆತು ಗರ್ಭಿಣಿ ಸ್ತ್ರೀಯರಿಗೆ ಅವರ ಆರೋಗ್ಯದ ಬಗ್ಗೆ ತಿಳುವಳಿಕೆ ನೀಡಬೇಕು. ಆಶಾ ಕಾರ್ಯಕರ್ತೆಯರು ತಮ್ಮ ಕೆಲಸದಲ್ಲಿ ಹೆಚ್ಚು ಕಾಳಜಿವಹಿಸಿಕೊಳ್ಳುವಂತೆ ವೈದ್ಯರು ಅವರಿಗೆ ಸಲಹೆ ನೀಡಬೇಕು. ನಮಗೆ ಅಂಕಿ-ಅಂಶಗಳು ಮುಖ್ಯವಲ್ಲ ನೀವು ಮಾಡುವ ಕೆಲಸದಿಂದ ಬರುವ ಫಲಿತಾಂಶಗಳು ಬಹಳ ಮುಖ್ಯ ಎಂದು ಸರ್ಕಾರ ಸಂಸದೀಯ ಕಾರ್ಯದರ್ಶಿ ಡಾ. ಉಮೇಶ್ ಜಾಧವ್ ಅವರು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಮಲ್ಲೇಶ್ವರಂ ಕ್ಷೇತ್ರದ ಶಾಸಕರಾದ ಡಾ. ಅಶ್ವತ್ಥ್ ನಾರಾಯಣ, ಆರೋಗ್ಯ ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕಿ ಡಾ. ರೇಣುಕಾ, ಕೆ.ಸಿ. ಜನರಲ್ ಆಸ್ಪತ್ರೆಯ ಅಧೀಕ್ಷಕ ಡಾ. ಮಂಜುನಾಥ್ ಸೇರಿದಂತೆ ಆಸ್ಪತ್ರೆಯ ಹಿರಿಯ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು.

ಕೆಎನ್‌ವಿ:ಜಯಾನಂದ:ಜಿಪಿಆರ್.